ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ:080-22343904/05

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು-560001,

ಸಂಖ್ಯೆ:ಕಾಶಿಇ/ಶೈವಿ/102/ಜಿ.ಇ.ಆರ್-ಹೆಚ್ಚಳ/2017-18

ದಿನಾಂಕ:02.08.2017

## ಸುತ್ತೋಲೆ

ವಿಷಯ: ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಸಾಮಾನ್ಯ ಪ್ರವೇಶಾತಿ ಅನುಪಾತ (ಜಿ.ಇ.ಆರ್) ಅನ್ನು ವರ್ಧಿಸುವ ಮತ್ತು ಗ್ರಾಮೀಣ ಭಾಗದ ಜನತೆಯ ಪಾಲ್ಗೊಳ್ಳುವಿಕೆಯನ್ನು ಪ್ರೋತ್ಸಾಹಿಸುವ ಬಗ್ಗೆ.

* * * * *

ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಸಾಮಾನ್ಯ ಪ್ರವೇಶಾತಿ ಅನುಪಾತವನ್ನು (ಜಿ.ಇ.ಆರ್) ವರ್ಧಿಸುವ ಮತ್ತು ಗ್ರಾಮೀಣ ಭಾಗದ ಜನತೆಯ ಪಾಲ್ಗೊಳ್ಳುವಿಕೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:28-07-2017 ರಲ್ಲಿ ಸ್ಪಷ್ಟ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿದ್ದು, ಈ ಬಗ್ಗೆ ಈಗಾಗಲೇ ದಿನಾಂಕ:29-07-2017ರಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲಾ ಪ್ರಾಂಶುಪಾಲರೊಂದಿಗೆ ಚರ್ಚಿಸಿ, ಮಾಹಿತಿಯನ್ನು ನೀಡಲಾಗಿರುತ್ತದೆ.

ದಿನಾಂಕ:29-07-2017 ರಂದು ಏರ್ಪಡಿಸಲಾಗಿದ್ದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಸೂಚಿಸಿದಂತೆ, ಕೈಗೊಂಡಿರುವ ಕ್ರಮಗಳ ಕುರಿತು ಪರಾಮರ್ಶಿಸಲು ದಿನಾಂಕ:03-08-2017 ರಂದು ಬೆಳಗ್ಗೆ 10:30 ರಿಂದ 1:00 ಗಂಟೆಯವರೆಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆಯನ್ನು ಏರ್ಪಡಿಸಲಾಗಿದೆ. ಈ ಸಭೆಯಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳು ಈ ಕಾರ್ಯಕ್ರಮದ ಮುಖ್ಯ ನೋಡಲ್ ಅಧಿಕಾರಿಗಳಾದ ಸಂಬಂಧಿಸಿದ ಲೀಡ್ ಕಾಲೇಜಿನ ಪ್ರಾಂಶುಪಾಲರ ನೇತೃತ್ವದಲ್ಲಿ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಕೆ-ಸ್ವಾನ್ ಕೇಂದ್ರದಲ್ಲಿ ಅಗತ್ಯ ಮಾಹಿತಿಗಳೊಂದಿಗೆ ಕಡ್ಡಾಯವಾಗಿ ಹಾಜರಿರಲು ಸೂಚಿಸಲಾಗಿದೆ. ನಿಮ್ಮ ಸಮೀಕ್ಷೆಯ ವರದಿಯನ್ನು ಇ-ಮೇಲ್ ವಿಳಾಸ **tqmcce@gmail.com** ಗೆ ಕಳುಹಿಸುವಂತೆ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ನಿರ್ದೇಶಕರು**

ಇವರಿಗೆ,

1) ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರಗಿ.
2) ಲೀಡ್ ಕಾಲೇಜಿನ ಪ್ರಾಂಶುಪಾಲರುಗಳು/ಮುಖ್ಯ ನೋಡಲ್ ಅಧಿಕಾರಿಗಳಿಗೆ
3) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
4) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು.

**ಪ್ರತಿಯನ್ನು ಮಾಹಿತಿಗಾಗಿ:**

1) ಆಯುಕ್ತರು, ನಿರ್ದೇಶಕರು, ಹೆಚ್ಚುವರಿ ನಿರ್ದೇಶಕರು, ಮುಖ್ಯ ಆಡಳಿತಾಧಿಕಾರಿಗಳು, ಜಂಟಿ ನಿರ್ದೇಶಕರು ರವರ ಆಪ್ತ ಶಾಖೆಗೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಅಧಿಕಾರಿಗಳ ಅವಗಾಹನೆಗೆ ತರಲು ತಿಳಿಸಿದೆ.
2) ಕಛೇರಿ ಪ್ರತಿ